# ಕರ್ನಾಟಕ ಸರ್ಕಾರ

## ಉಪವಿಭಾಗಾಧಿಕಾರಿಗಳು ಹಾಗೂ ಉಪವಿಭಾಗದ ದಂಡಾಧಿಕಾರಿಗಳ ಕಾರ್ಯಾಲಯ, ಹಾಸನ ಉಪವಿಭಾಗ, ಹಾಸನ ಜಿಲ್ಲೆ.

E-Mail:- hsn.sub@gmail.com

**ನಂ. ಮಾಹಿತಿ ಹಕ್ಕು (ಮಿ) 01/2020-21** **ದಿನಾಂಕ: 27-7-2020**

**ಅಧಿಸೂಚನೆ (ಪರಿಷ್ಕೃತ)**

**ವಿಷಯ:** ಭಾರತ ಸರ್ಕಾರದ ಮಾಹಿತಿ ಪಡೆಯಲು ಹಕ್ಕು ಅಧಿನಿಯಮ 2005ರ ಪ್ರಕರಣ ಕಲಂ. 4(1) (ಬಿ) ಅನುಸಾರ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಕಛೇರಿಯ ಮಾಹಿತಿಯನ್ನು ಪ್ರಕಟಿಸುವ ಬಗ್ಗೆ.

ಭಾರತ ಸರ್ಕಾರವು ಜಾರಿಗೆ ತಂದಿರುವ 2005ರ ಮಾಹಿತಿ ಹಕ್ಕು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಸುವ ಸಂಬಂಧ ಹಕ್ಕು ಅಧಿನಿಯಮ 2005ರ ಸೆಕ್ಷನ್ 5(1) 5(2) ಮತ್ತು 19(1) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಗೆ ಸೇರಿದ ತಹಶೀಲ್ದಾರ್ ಕಛೇರಿ ವ್ಯಾಪ್ತಿಯ ಮಹಿತಿಯನ್ನು ಕೋರುವ ವ್ಯಕ್ತಿಗಳಗೆ ಅಂತಹ ಮಾಹಿತಿಯನ್ನು ಮೇಲಿನ ಕಾಯ್ದೆಯನ್ವಯ ಒದಗಿಸಲು ಮಾಹಿತಿ ಕೋರಿರುವ ಅರ್ಜಿಗಳಿಗೆ ಅಥವಾ ಮೇಲ್ಮನವುಗಳನ್ನು ಸ್ವೀಕರಿಸಲು ಅನುಕ್ರಮವಾಗಿ " ಸಾರ್ವಜನಿಕ ಮಾಹಿತಿ ಅಧಿಕಾರಿ" ಮತ್ತು "ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ" ಹಾಗೂ "ಮೇಲ್ಮನವಿ ಪ್ರಾಧಿಕಾರಿಗಳನ್ನಾಗಿ" ಈ ಕೆಳಕಂಡಂತೆ ಸರ್ಕಾರದಿಂದ ನೇಮಿಸಲಾಗಿದೆ.

(ಸರಕಾರದ ಅಧಿಸೂಚನೆ ನಂ. ಕಂಇ /37/ವಿಮಕ/ 2005 ದಿನಾಂಕ: 12/8/2005. )

| **ಕ್ರಮ ಸಂಖ್ಯೆ** | **ಇಲಾಖೆಯ ಹೆಸರು** | **ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ** | **ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ** | **ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005ರ ಸೆಕ್ಷನ್ 19(1)ರ ಪ್ರಕಾರ ಮೇಲ್ಮನವಿ ಪ್ರಾಧಿಕಾರ** |
|---|---|---|---|---|
| 1 | ಉಪವಿಭಾಗಾಧಿಕಾರಿಗಳು ಹಾಗೂ ಉಪವಿಭಾಗದ ದಂಡಾಧಿಕಾರಿಗಳ ಕಛೇರಿ ಹಾಸನ ಉಪವಿಭಾಗ, ಹಾಸನ ಜಿಲ್ಲೆ. | ಗ್ರೇಡ್ – 2 ತಹಶೀಲ್ದಾರ್ | ವಿಷಯ ನಿರ್ವಾಹಕರು (ವಿಷಯ ವಾರು) | ಉಪ ವಿಭಾಗಾಧಿಕಾರಿಗಳು, ಹಾಸನ ಉಪ ವಿಭಾಗ, ಹಾಸನ |

ಕೇಂದ್ರ ಸರ್ಕಾರವು ಜಾರಿಗೆ ತಂದಿರುವ 2005ರ ಮಾಹಿತಿ ಹಕ್ಕು ಕಾಯಿದೆ ಇದಾಗಿದ್ದು, ಸದರಿ ಕಾಯ್ದೆಯ ಕಲಂ 4(1) ರಡಿ ಒಟ್ಟು 17 ವಿವಿಧ ಅಂಶಗಳನ್ನೊಳಗೊಂಡ ಒಂದು ಕೈಪಿಡಿ ತಯಾರಿಸಬೇಕಾಗಿದ್ದು, ಈ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಘಟಕಗಳ ಕಾರ್ಯಚಟುವಟಿಕೆಗಳ ಮಾಹಿತಿ ಈ ಕೆಳಕಂಡಂತಿರುತ್ತದೆ.

**(ಅ) ಕಾರ್ಯ ವಿಧಾನ**

**ಕಂದಾಯ ಇಲಾಖೆಯು ಕೆಳಕಂಡ ಸಾಮಾನ್ಯ ಕಾರ್ಯಗಳನ್ನು ಪ್ರಮುಖವಾಗಿ ನಿರ್ವಹಿಸುತ್ತದೆ.**

1. ಕಾರ್ಯಕಾರಿ ದಂಡಾಧಿಕಾರಿಯ ಕಾರ್ಯ ನಿರ್ವಹಣೆ
2. ಸರ್ಕಾರಕ್ಕೆ ಸಂಬಂಧಿಸಿದ ಎಲ್ಲಾ ರೀತಿಯ ಸಾರ್ವಜನಿಕ ದೂರು ನಿರ್ವಹಣೆ.
3. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಸಾರ್ವಜನಿಕ ವಿತರಣಾ ವ್ಯವಸ್ಥೆಯ ನಿರ್ವಹಣೆ.
4. ಎಲ್ಲಾ ರೀತಿಯ ಚುನಾವಣೆಗಳನ್ನು ನಡೆಸುವುದು.
5. ಎಲ್ಲಾ ರೀತಿಯ ಗಣತಿ ಕಾರ್ಯವನ್ನು ನಡೆಸುವುದು (ಜನಗಣತಿ, ಜಾನುವಾರು ಗಣತಿ, ಕೃಷಿ ಗಣತಿ, ಆರ್ಥಿಕ ಗಣತಿ) .
6. ಎಲ್ಲಾ ಔಪಚಾರಿಕೆ ಸಮಾರಂಭಗಳಲ್ಲಿ ರಾಜ್ಯದ ಪರವಾಗಿ ಶಿಷ್ಟಾಚಾರ ಕಾರ್ಯ ನಿರ್ವಹಿಸುವುದು.
7. ಪ್ರಕೃತಿ ಕೋಪ ನಿರ್ವಹಣೆ, ನೈಸರ್ಗಿಕ ಮತಯ್ತು ಮಾನವ ನಿರ್ಮಿತ ವಿಕೋಪಗಳಿಂದ ಬಾಧಿತರಾದವರಿಗೆ ಪರಿಹಾರ, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾರ್ಯ ನಿರ್ವಹಣೆ.
8. ವೃದ್ಧಾಪ್ಯ ವೇತನ ಮತ್ತಿತರ ಸಾಮಾಜಿಕ ಸುರಕ್ಷತೆಯನ್ನು ನಿರ್ವಹಿಸುವುದು.
9. ಆಯುಧ ಕಾಯಿದೆಯಡಿ ಪ್ರಕರಣಗಳ ವಿಲೇವಾರಿ.
10. ಆದಾಯ, ಜಾತಿ, ಧರ್ಮ, ನಿವಾಸ, ರಾಷ್ಟ್ರೀಯತೆ, ಅಲ್ಪ ಸಂಖ್ಯಾತರ ಸ್ಥಾನಮಾನಗಳ ಬಗ್ಗೆ ಪ್ರಮಾಣ ಪತ್ರ ನೀಡುವುದು.
11. ಪೌರಾಡಳಿತ.
12. ನ್ಯಾಯಾಲಯಗಳಲ್ಲಿ ಸರ್ಕಾರಿ ವ್ಯಾಜ್ಯ ನಿರ್ವಹಣೆ.
13. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಮತ್ತು ಕಾರ್ಯಕ್ರಮಗಳ, ಸಮನ್ವಯ ಹಾಗೂ ಪರಿವೀಕ್ಷಣಾ ಕಾರ್ಯ ನಿರ್ವಹಣೆ.
14. ಸರ್ಕಾರ ಕಾಲ ಕಾಲಕ್ಕೆ ಜರಿಗೆ ತರುವ ಯೋಜನೆಗಳ ನಿರ್ವಹಣೆ, ಪತ್ರಿಕಾ ಕಾಯ್ದೆಯಡಿ ನಿರ್ವಹಣೆ.
15. ಮನರಂಜನಾ ಕಯ್ದೆಯಡಿ ನಿರ್ವಹಣೆ.

**(ಆ) ಕಂದಾಯ ಆಡಳಿತ :-**

ಅದಾಗ್ಯೂ ಕಂದಾಯ ಮತ್ತಿತರ ಕಾನೂನುಗಳಲ್ಲಿ ಸಾಂಪ್ರದಾಯಕವಾಗಿ ಕಂದಾಯ ಇಲಾಖೆಗೆ ವಹಿಸಲಾಗಿರುವ ಪ್ರಮುಖ ಕಾರ್ಯಗಳು ಕೆಳಕಂಡಂತಿವೆ.

1. ರಾಜ್ಯದಲ್ಲಿನ ಭೂದಾಖಲೆಗಳ ನಿರ್ವಹಣೆ ಮತ್ತು ಎಲ್ಲಾ ಜಮೀನುಗಳ ಭುಮಾಪನ.
2. ಸರಕಾರಿ ಬಾಕಿ ವಸೂಲಾತಿ ಭೂ ಕಂದಾಯ, ನೀರು ತೆರಿಗೆ, ಮತ್ತಿತರ ಸರ್ಕಾರಿ ಬಾಕಿ, ಉಪಕರ ಮತ್ತು ತೆರಿಗೆಗಳ ವಸೂಲಾತಿ.
3. ಗೋಮಾಳ, ಕೆರೆ ಅಂಗಳ, ಉಪ ವನಗಳು ಇತ್ಯಾದಿ ಸಾಮುದಾಯಿಕ ಜಮೀನುಗಳು ನಿರ್ದಿಷ್ಟ ಉದ್ದೇಶಕ್ಕಾಗಿ ಕಾದಿರಿಸಿದ ಜಮೀನುಗಳು ಸೇರಿದಂತೆ ಎಲ್ಲಾ ಸರ್ಕಾರಿ ಜಮೀನುಗಳ ನಿರ್ವಹಣೆ.
4. ಭೂ ಮಂಜೂರಾತಿ.
5. ಭೂ ಸುಧಾರಣೆ ಮತ್ತು ಗೇಣಿದಾರಿಕೆಯ ನಿಬಂಧನೆಗಳ ನಿರ್ವಹಣೆ.
6. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಜಮೀನು ವಿಚಾರ.
7. ಭು ಪರಿವರ್ತನೆ ಮತ್ತು ಸರಿಯಾದ ರೀತಿಯಲ್ಲಿ ಬಡಾವಣೆಗಳ ಅಬಿವೃದ್ಧಿ.
8. ಕರ್ನಾಟಕ ಭೂಕಂದಾಯ ಕಾಯ್ದೆಯಡಿ ಬರುವ ಎಲ್ಲಾ ವ್ಯವಹಾರಗಳ ನಿರ್ವಹಣೆ.

**(ಇ) ಕಾನೂನು ಆಡಳಿತ :-**

**ಉಪವಿಭಾಗಾಧಿಕಾರಿಗಳು ಹೊಂದಿರುವ ಅಧಿಕಾರದ ಕೇಂದ್ರ ಹಾಗೂ ರಾಜ್ಯ ಮಟ್ಟದ ಮುಖ್ಯ ಕಾಯ್ದೆಗಳ ಮತ್ತು ಕಾನೂನುಗಳ ವಿವರ :-**

| | |
|---|---|
| 1) | ಕರ್ನಾಟಕ ನೀರಾವರಿ ಆಕ್ಟ್ , 1965 |
| 2) | ಕರ್ನಾಟಕ ರೆಂಟ್ ಆಕ್ಟ್, 1999 ಹಾಗೂ ನಿಯಮ 2001 |
| 3) | ಕರ್ನಾಟಕ ಭೂಕಂದಾಯ ನಿಯಮ, 1964 |
| 4) | ಕರ್ನಾಟಕ ಭೂ ಕಂದಾಯ ಕಾಯ್ದೆ 1961 |
| 5) | ಕರ್ನಾಟಕ ಭೂಮಂಜೂರಾತಿ ನಿಯಮಗಳು, 1969 |
| 6) | ಕರ್ನಾಟಕ ಮುನಿಸಿಪಾಲಿಟಿ ಆಕ್ಟ್ 1964 |
| 7) | ನ್ಯಾಷನಲ್ ಡಿಸಾಸ್ಟರ್ ಮ್ಯಾನೇಜ್‌ಮೆಂಟ್ |
| 8) | ಕರ್ನಾಟಕ ಇನಾಮ್ಸ್ ಅಂಡ್ ಸರ್ಟೈನ್ ಅಬಾಲಿಷನ್ ಆಕ್ಟ್ |
| 9) | ಕರ್ನಾಟಕ ಲ್ಯಾಂಡ್ ಅಕ್ವಿಜಿಷನ್ ಆಕ್ಟ್, 1894 |
| 10) | ಕರ್ನಾಟಕ ಸಿವಿಲ್ ಸರ್ವೀಸ್ (ಸಿಸಿಎ) ರೂಲ್ಸ್ 1957 |
| 11) | ಕರ್ನಾಟಕ ಹಿಂದೂ ರಿಲಿಜಿಯಸ್ ಇನ್‌ಸ್ಟಿಟ್ಯೂಷನ್ ಮತ್ತು ಎಂಡೋಮೆಂಟ್ ಆಕ್ಟ್ 1957 |
| 12) | ಭಾರತೀಯ ದಂಡ ಸಂಹಿತೆ |
| 13) | ಕರ್ನಾಟಕ ಪೊಲೀಸ್ ಅಧಿನಿಯಮ |
| 14) | ಕ್ರಿಮಿನಲ್ ಪ್ರೊಸೀಜರ್ ಕೋಡ್ |
| 15) | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಕೆಲವು ಜಮೀನುಗಳ ಪರಭಾರೆ ನಿಷೇಧ) ಕಾಯ್ದೆ 1978 |
| 16) | ಕರ್ನಾಟಕ ಗ್ರಾಮ ನೌಕರಿಗಳ ರದ್ದತಿ ಅಧಿನಿಯಮ 1961 |
| 17) | ಪರಿಶಿಷ್ಟ ಜಾತಿ ಪ್ರಾತಿನಿಧ್ಯ ಅಧಿನಿಯಮ 1950 ಮತ್ತು 1951 |
| 18) | ಮತದಾರರ ನೋಂದಣಿ ನಿಯಮಾವಳಿ 1961 |

ಮಾಹಿತಿ ಹಕ್ಕು ಅಧಿನಿಯಮ-2005

| | |
|---|---|
| 19) | ಭಾರತೀಯ ಮುದ್ರಾಂಕ ಕಾಯ್ದೆ 1899 |
| 20) | ರೆವಿನ್ಯೂ ರಿಕವರಿ ಆಕ್ಟ್ (1 ಓಫ್ 1890) |
| 21) | ಅವಶ್ಯಕ ವಸ್ತುಗಳ ಕಾಯ್ದೆ 1955 |
| 22) | ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ಮತ್ತು ನಿಯಮಾವಳಿ 1974 |
| 23) | ಕರ್ನಾಟಕ ಹಲವು ಇನಾಂ ರದ್ಧತಿ ಅಧಿನಿಯಮ 1977 |
| 24) | ಕರ್ನಾಟಕ ಗ್ರಾಮ ನೌಕರಿಗಳ ರದ್ದತಿ ಅಧಿನಿಯಮ 1961 |
| 25) | ಕರ್ನಾಟಕ ಪುರಸಭೆಗಳ ಅಧಿನಿಯಮ 1964 |
| 26) | ಕರ್ನಾಟಕ ಕೃಷಿ ಸಾಲ ಕಾರ್ಯಾಚರಣೆ ಮತ್ತು ಇತರೆ ಉಪ ಬಂಧಗಳ ಅಧಿನಿಯಮ 1974 ಮತ್ತು ನಿಯಮಾವಳಿ 1975 |
| 27) | ಕರ್ನಾಟಕ ವೃದ್ದಾಪ್ಯ ವೇತನ ನಿಯಮಾವಳಿ |
| 28) | ನಿರ್ಗತಿಕ ವಿಧವಾ ವೇತನ ನಿಯಮಾವಳಿ |
| 29) | ದೈಹಿಕ ಅಂಗವಿಕಲರಿಗೆ ನಿರ್ವಹಣಾ ಭತ್ಯೆ ಮಂಜೂರಿ ನಿಯಮಾವಳಿ |
| 30) | ಕರ್ನಾಟಕ ಋಣ ವಿಮೋಚನಾ ಅಧಿನಿಯಮ |
| 31) | ಮತದಾರರ ನೋಂದನಿ ಅಧಿನಿಯಮ |
| 32) | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) ಅಧಿನಿಯಮ 1966 |
| 33) | ಕರ್ನಾಟಕ ನೀರಾವರಿ ಅಧಿನಿಯಮ 1965 |
| 34) | ಕರ್ನಾಟಕ ನೀರಾವರಿ ( ನೀರಿನ ಕರ ಆಕರಣೆ ) ನಿಯಮಾವಳಿ 1965 |
| 35) | ಕರ್ನಾಟಕ ಅರಣ್ಯ ನಿಯಮಾವಳಿ 1969 |
| 36) | ಕರ್ನಾಟಕ ಜಾನುವಾರು ಅತಿಕ್ರಮ ಪ್ರವೇಶ ಅಧಿನಿಯಮ 1966 |
| 37) | ಏಲಕ್ಕಿ ಅಧಿನಿಯಮ 1965 |
| 38) | ಕರ್ನಾಟಕ ಸಾರ್ವಜನಿಕ ಆವರಣಗಳ ಅಧಿನಿಯಮ 1974 ಮತ್ತು ಅದರಡಿ ನಿಯಮಾವಳಿ. |

ಮಾಹಿತಿ ಹಕ್ಕು ಅಧಿನಿಯಮ-2005

(ಈ) ಉಪವಿಭಾಗದ ಅಧಿಕಾರಿಗಳ ಮತ್ತು ನೌಕರರ ಅಧಿಕಾರಗಳು ಮತ್ತು ಕರ್ತವ್ಯದ ವಿವರಗಳು :–




ಮಾಹಿತಿ ಹಕ್ಕು ಅಧಿನಿಯಮ-2005

**ದಂಡಾಧಿಕಾರಿಯಾಗಿ ಉಪವಿಭಾಗಾಧಿಕಾರಿಗಳು ಈ ಕೆಳಗಿನ ಕಾಯ್ದೆಗಳಡಿಯಲ್ಲಿ ಅಧಿಕಾರ ಹಾಗೂ ಕರ್ತವ್ಯಗಳನ್ನು ಹೊಂದಿರುತ್ತಾರೆ.**

1. ದಂಡ ಪ್ರಕ್ರಿಯೆ ಸಂಹಿತೆ 1974.
2. ಭಾರತ ಸಾಕ್ಷ್ಯ ಅಧಿನಿಯಮ 1963.
3. ಕರ್ನಾಟಕ ಪೊಲೀಸ್ ಅಧಿನಿಯಮ 1963.
4. ಜೀತದಾಳು ಪದ್ಧತಿ (ನಿರ್ಮೂಲನಾ ) ಅಧಿನಿಯಮ 1976.
5. ಭಾರತೀಯ ಮುದ್ರಾಂಕ ಅಧಿನಿಯಮ 1899.
6. ಪ್ರಾಣಿಗಳಿಗೆ ಹಿಂಸೆ ಅಧಿನಿಯಮ 1960.
7. ಕರ್ನಾಟಕ ಭಿಕ್ಷಾಟನಾ ಅಧಿನಿಯಮ 1975.
8. ಸಾರ್ವಜನಿಕ ಆರೋಗ್ಯ ಅಧಿನಿಯಮ 1944.
9. ಕರ್ನಾಟಕ ಮಾರಾಟ ಕರ ಅಧಿನಿಯಮ 1957.
10. ಸತಿ ಹೋಗುವ (ನಿಷೇಧ) ಅಧಿನಿಯಮ 1987.
11. ಪ.ಜಾತಿ/ ಪ. ವರ್ಗಗಳ (ದೌರ್ಜನ್ಯ ನಿಷೇಧ) ಅಧಿನಿಯಮ 1989.
12. ಕರ್ನಾಟಕ ಆಹಾರ ಮತ್ತು ನಾಗರೀಕ ಪೂರೈಕೆ ಅಧಿನಿಯಮ.
13. ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳ ಜೀರ್ಣೋದ್ಧಾರ.

**1. ಕಾಗದ ಪತ್ರಗಳ ಸ್ವೀಕೃತಿ ವಿಲೇವಾರಿ :-**

ಸಾರ್ವಜನಿಕರಿಂದ, ಅಧೀನ ಕಛೇರಿಗಳಿಂದ ಮತ್ತು ಸರ್ಕಾರ ಹಾಗೂ ಮೇಲಾಧಿಕಾರಿಗಳಿಂದ ಬರುವಂತಹ ಎಲ್ಲಾ ಕಾಗದ ಪತ್ರಗಳನ್ನು / ಕಡತಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ಸ್ವೀಕರಿಸಿ, ಸಾರ್ವಜನಿಕರ ಮನವಿ ಬಗ್ಗೆ ಸ್ಥಳದಲ್ಲೇ ಸ್ವೀಕೃತಿ ಪತ್ರವನ್ನು ನೀಡಿದ ನಂತರ ಗ್ರೇಡ್ – 2 ತಹಶೀಲ್ದಾರರ ಮುಖಾಂತರ ಉಪವಿಭಾಗಾಧಿಕಾರಿಗಳ ಗಮನಕ್ಕೆ ತಂದು ಸ್ವೀಕೃತಿ ಶಾಖೆಯಲ್ಲಿ ದಾಖಲಿಸಿ ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ ಪ್ರತಿ ಕಡತ / ಕಾಗದ ಪತ್ರಗಳನ್ನು ಶಾಖೆವಾರು ಗುರುತಿಸಿವಂತೆ ಹಾಕಿದ ನಂತರ ಅಗತ್ಯ ಕ್ರಮ ಕೈಗೊಳ್ಳಲು ನೀಡಲಾಗುತ್ತದೆ. ಉದಾಹರಣೆಗೆ,

1. ಕಂದಾಯ ಮೇಲ್ಮನವಿ
2. ಭೂ ಮಂಜೂರಾತಿ (ಎಲ್.ಎನ್.ಡಿ)
3. ಭೂ ಸುಧಾರಣೆ (ಎಲ್.ಆರ್.ಎಫ್)
4. ಭೂ ಸ್ವಾಧೀನ (ಎಲ್.ಎ.ಕ್ಯೂ)
5. ಲೆಕ್ಕ ಶಾಖೆ (ಎ.ಸಿ.ಟಿ)
6. ಹಕ್ಕು ದಾಖಲೆ (ಆರ್.ಆರ್.ಟಿ)
7. ಸಿಬ್ಬಂದಿ ಶಾಖೆ (ಇ.ಎಸ್.ಟಿ)
8. ಅಭಿಲೇಖಾಲಯ (ಆರ್.ಕೆ.)
9. ಭೂ ಪರಿವರ್ತನೆ (ಎ.ಎಲ್.ಎನ್.)
10. ಸ್ವಾತಂತ್ರ್ಯ ಹೋರಾಟಗಾರರ ಗೌರವಧನ (ಎಫ್.ಎಫ್.ಪಿ)
11. ಚುನಾವಣೆ (ಇ.ಎಲ್.ಎನ್.)
12. ಆಡಳಿತ (ಎ.ಡಿ.ಎಂ)
13. ಮೆಜಿಸ್ಟೀರಿಯಲ್ ಶಾಖೆ (ಎಂ.ಎ.ಜಿ)
14. ಕರ್ನಾಟಕ ಪ.ಜಾತಿ / ವರ್ಗಗಳ ಪರಭಾರೆ ನಿಷೇಧ (ಪಿ.ಟಿ.ಸಿ.ಎಲ್)
15. ಕರ್ನಾಟಕ ಗ್ರಾಮ ರದ್ದಿಯಾತಿ ಕಾಯ್ದೆ (ಹೆಚ್.ಒ.ಎ)
16. ನೀರಾವರಿ (ಐ.ಆರ್.ಆರ್)
17. ಅರಣ್ಯ (ಎಫ್.ಒ.ಆರ್)
18. ಕೊಳಚೆ ಪ್ರದೇಶ (ಕೆ.ಎ.ಎಸ್)

19. ಸಾಲ್ವೆನ್ಸಿ (ಎಸ್.ಒ.ಎಲ್)
20. ಸೋಲೇಷಿಯಂ ಫಂಡ್ (ಎಸ್.ಎಫ್.ಎಸ್)
21. ವಿಧಾನ ಸಭಾ / ಪರಿಷತ್ ಸದಸ್ಯರ ನಿಧಿ (ಕೆ.ಎಲ್.ಎ.ಡಿ)
22. ಲೋಕ ಸಭಾ ಸದಸ್ಯರ ನಿಧಿ (ಎಂ.ಪಿ.ಎಲ್.ಎ.ಡಿ)
23. ಮಿಸಲೇನಿಯಸ್ (ಎಂ.ಎಸ್.ಸಿ)
24. ಸಾರ್ವಜನಿಕ ಕುಂದು ಕೊರತೆ (ಸಿ.ಎಂ.ಪಿ)
25. ಪ್ರಕೃತಿ ವಿಕೋಪ (ಸಿ.ಎ.ಎಲ್)
26. ಜನಗಣತಿ ಜಾನುವಾರು ಗಣತಿ (ಸಿಇಎನ್)
27. ಇನಾಂ ರದ್ದಿಯಾತಿ ತಸ್ತೀಕು (ಐಎನ್ಎ)
28. ಪಿಂಚಣಿ (ಪಿಇಎನ್)
29. ಸಕಾಲ

**(2) ಕಛೇರಿ ಪ್ರಕಾರ್ಯಗಳ ನಿರ್ವಹಣೆಗೆ ರೂಪಿಸಿರುವ ಸೂತ್ರಗಳು :-**

1. ಕಛೇರಿಯಲ್ಲಿ ಸ್ವೀಕರಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ದಾಖಲಿಸಿವಿಷಯ ನಿರ್ವಾಹಕರಿಗೆ ನೀಡುವಂತಹ ವ್ಯವಸ್ಥೆ ಕಲ್ಪಿಸಲಾಗಿದೆ.
2. ಸಾರ್ವಜನಿಕರಿಂದ ಸ್ವೀಕರಿಸಲಾಗುವ ಕಾಗದ ಪತ್ರಗಳಿಗೆ ಸ್ವೀಕೃತಿ ನೀಡುವುದಲ್ಲದೆ ಕಾರ್ಯಗತ ಅವಧಿ ನಿಗದಿ ಪಡಿಸಿ ತಿಳಿಸಲಾಗುತ್ತಿದೆ.
3. ಸಾರ್ವಜನಿಕ ಕುಂದು ಕೊರತೆಗಳ ನಿವಾರಣೆ ಬಗ್ಗೆ ಸ್ವೀಕರಿಸಲಾಗುವ ಎಲ್ಲಾ ಮನವಿಗಳನ್ನು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ನಮೂದಿಸಿ, ಕ್ಲಿಪ್ತ ಕಾಲದಲ್ಲಿ ಉತ್ತರ ನೀಡುವುದು.

ಕಛೇರಿ ಕೈಪಿಡಿ ನಿಯಮಾವಳ ರೀತ್ಯ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರು ಸ್ವೀಕರಿಸಿ, ಗರಿಷ್ಟ 5 ದಿವಸದೊಳಗಾಗಿ ವಿಷಯ ನಿರ್ವಾಹಕರು ಎಲ್ಲಾ ಸ್ವೀಕರಿಸುವ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರ ದಿನಚರಿಯಲ್ಲಿ ನಮೂದಿಸಿಕೊಂಡು ತದನಂತರ ವಿಷಯ ವಹಿಯಲ್ಲಿ ಅನುಕ್ರಮವಾಗಿ ನೊಂದಾಯಿಸಿಕೊಂಡು ಕಡತ ಗಳಲ್ಲಿ ಟಿಪ್ಪಣಿ ಹಾಕಿ ಮಂಡಿಸಿರುತ್ತಾರೆ. ವಿಷಯ ನಿರ್ವಾಹಕರೆಲ್ಲರೂ ಕಛೇರಿ ಕಾರ್ಯವಿಧಾನದ ರೀತ್ಯ ಐದು ಕಟ್ಟು (**Five Bundle System**) ವಿಧಾನ ಅಳವಡಿಸಿ ಕಾರ್ಯನಿರ್ವಹಿಸುತ್ತಾರೆ. ವಿಷಯ ನಿರ್ವಾಹಕರಿಂದ ಬಂದಂತಹ ಎಲ್ಲಾ ಕಡತಗಳ ಪರಿಶೀಲನೆ ಮಾಡಿ ಶಾಖಾ ಮುಖ್ಯಸ್ಥರಿಗೆ, ವಿಳಂಬವಾಗದ ರೀತಿ ಕಡತದಲ್ಲಿ ವಿಷಯವಾರು ತೀರ್ಮಾನ ಕೈಗೊಳ್ಳುವ ನಿಟ್ಟನಲ್ಲಿ ಸೂಕ್ತ ಅಭಿಪ್ರಾಯದೊಂದಿಗೆ ಸಲ್ಲಿಸಿರುತ್ತಾರೆ. ಶಾಖಾ ಮುಖ್ಯಸ್ಥರು ಕಡತಗಳನ್ನು ಪರಿಶೀಲಿಸಿ ತಮ್ಮ ಅಭಿಪ್ರಾಯದೊಂದಿಗೆ ತಹಶೀಲ್ದಾರ್ ರವರಿಗೆ ಕಡತಗಳನ್ನು ಸಲ್ಲಿಸುತ್ತಾರೆ. ತಹಶೀಲ್ದಾರ್ ರವರು ತಮಗೆ ಬರುವ ಕಡತಗಳನ್ನು ಪರಿಶಿಲಿಸಿ ನಿಯಮಾನುಸಾರ ಆದೇಶ ಹೊರಡಿಸುತ್ತಾರೆ. ಕಡತಗಳಲ್ಲಿ ತೀರ್ಮಾನ ಕೈಗೊಳ್ಳುವ ಬಗ್ಗೆ ಅನುಸರಿಸುವ ಕಾರ್ಯವಿಧಾನ ಕಛೇರಿ ಕೈಪಿಡಿಯ ನಿಯಮಾವಳ ರೀತ್ಯ ಕ್ರಮ ವಹಿಸಲಾಗುತ್ತದೆ.

**(3) ಕಛೇರಿಯ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ಪಟ್ಟಿ**

ಕಛೇರಿ ಘಟಕದಲ್ಲಿ ಮೇಲೆ ರೂಪಿಸಲಾದ ಕಾಯ್ದೆ ನಿಯಮಗಳಡಿ ನಿರ್ವಹಿಸುವ ಎಲ್ಲಾ ಕಡತಗಳಲ್ಲಿ ಅಂತಿಮ ಆದೇಶ ನೀಡಿ ಮುಕ್ತಾಯವಾದ ನಂತರ ಪ್ರತಿ ಕಡತಗಳ ಪ್ರಾಮುಖ್ಯತೆಯನ್ನನುಸರಿಸಿ, ಪ್ರವರ್ಗ 'ಎ' 'ಬಿ' 'ಸಿ' 'ಡಿ' ಮತ್ತು 'ಇ' ಎಂದು ವರ್ಗೀಕರಿಸಿ ನಿರ್ವಹಿಸಲಾಗುತ್ತದೆ. ಪ್ರತಿ ವರ್ಗೀಕರಣದ ಅವಧಿ ಕೆಳಕಂಡಂತಿರುತ್ತದೆ.

| | |
|---|---|
| 'ಎ' ಡಿಸ್ | ಶಾಶ್ವತ |
| 'ಬಿ' ಡಿಸ್ | 30 ವರ್ಷಗಳು |
| 'ಸಿ' ಡಿಸ್ | 10 ವರ್ಷಗಳು |
| 'ಡಿ' ಡಿಸ್ | 5 ವರ್ಷಗಳು |
| 'ಇ' ಡಿಸ್ | 1 ವರ್ಷ |

**(4) ಅದರ ಕಾರ್ಯ ನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂಥ ಯಾವುದೇ ವ್ಯವಸ್ಥೆಯ ವಿವರಗಳು**

1. ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು.
2. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಸಭೆಗಳನ್ನು ಏರ್ಪಡಿಸುವುದು.
3. ಸಾರ್ವಜನಿಕ ಕುಂದು ಕೊರತೆ ಆಲಿಸುವುದು.
4. ಪಾರದರ್ಶಕ ಕಾಯಿದೆ ಅನುಷ್ಠಾನ.
5. ಇತರ ಎಲ್ಲಾ ವರ್ಗದ ಜನರಿಂದ ಸ್ವೀಕರಿಸುವಂತಹ ಅಹವಾಲುಗಳು.
6. ಪ್ರಾಕೃತಿಕ ವಿಕೋಪ.

**(5) ಎಲ್ಲಾ ಯೋಜನೆಗಳ ವಿವರಗಳನ್ನು ಸೂಚಿಸುವ ಪ್ರಸ್ತಾವಿತ ವೆಚ್ಚಗಳನ್ನು ಮತ್ತು ಮಾಡಲಾದ ಬಡವಾಡೆಗಳ ವರದಿಯನ್ನು ಸೂಚಿಸಿ ಅದರ ಪ್ರತಿಯೊಂದು ಏಜನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯ ವಿವರಗಳು.**

ಯೋಜನೆಗಳು ಈ ಇಲಾಖಾ ವ್ಯಾಪ್ತಿಗೆ ಒಳಪಡುವುದಿಲ್ಲ.

**(6) ಹಂಚಿಕೆ ಮಾಡಲಾದ ಮೊಬಲಗಳನ್ನೊಳಗೊಂಡ ಸಹಾಯ ಧನ ಕಾರ್ಯಕ್ರಮಗಳ ಜಾರಿಯ ವತದಾನ ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳು.**

ಅಂತಹ ಕಾರ್ಯಕ್ರಮಗಳು ಈ ಇಲಾಖಾ ವ್ಯಾಪ್ತಿಗೆ ಒಳಪಡುವುದಿಲ್ಲ.

**(7) ನೀಡಿರುವ ರಿಯಾಯಿತಿಗಳು, ಅನುಮತಿ ಪತ್ರಗಳು, ಅಥವಾ ಅಧಿಕಾರ ಪತ್ರಗಳನ್ನು ಪಡೆಯುವವರ ವಿವರಗಳು.**

ಇಂತಹ ವಿಷಯಗಳು ಈ ಇಲಾಖಾ ವ್ಯಾಪ್ತಿಗೆ ಬರುವುದಿಲ್ಲ.

**(8) ಲಭ್ಯವಿರುವ ಅಥವಾ ಹೊಂದಿರುವ ಮಾಹಿತಿಯ ವಿವರಗಳನ್ನು ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ ಬಗ್ಗೆ.**

ಈ ಕಛೇರಿಯ ಅಭಿಲೇಖಾಲಯದಲ್ಲಿರುವ ಕಡತಗಳನ್ನು ಗಣಕೀಕರಣಗೊಳಿಸಲಾಗಿದೆ. ತಾಲ್ಲೂಕಿನ ಸಮಗ್ರ ಮಾಹಿತಿಯನ್ನು ಒಳಗೊಂಡ ವೆಬ್‌ಸೈಟ್ ಅನ್ನು ಸಾರ್ವಜನಿಕರ ಅನುಕೂಲಕ್ಕಾಗಿ ತಯಾರಿಸಲಾಗಿದೆ.

ವೆಬ್‌ಸೈಟ್ ವಿಳಾಸ – www.hassan.kar.nic.in

**(9) ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಪದನಾಮಗಳು ಮತ್ತು ಇತರೆ ವಿವರಗಳು :-**

# ಅಧಿಸೂಚನೆ

## ಭಾರತ ಸರ್ಕಾರದ ಮಾಹಿತಿ ಹಕ್ಕು ಅಧಿನಿಯಮ 2005 ರ ಪ್ರಕರಣ ಕಲಂ 4. (1) (ಬಿ) ಅನುಸಾರ ಪ್ರಕಟಿಸಬೇಕಾದ ವಿವರಗಳು

ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005ರ **(Central act 22 of 2005)** ಸೆಕ್ಷನ್ 5(1) 5(2) ಮತ್ತು 19(1) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಗೆ ಸೇರಿದ ತಹಶೀಲ್ದಾರ್ ರವರ ಕಛೇರಿಯ ಮಾಹಿತಿಯನ್ನು ಕೋರುವ ವ್ಯಕ್ತಿಗಳಗೆ ಅಂತಹ ಮಾಹಿತಿಯನ್ನು ಮೇಲ ಕಾಯ್ದೆಯನ್ವಯ ಒದಗಿಸಲು, ಮಾಹಿತಿ ಕೋರುವ ಅರ್ಜಿಗಳು ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಲು ಕ್ರಮವಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿ, ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಮೇಲ್ಮನವಿ ಪ್ರಾಧಿಕಾರಗಳನ್ನಾಗಿ ಈ ಕೆಳಕಂಡಂತೆ ಸರ್ಕಾರದಿಂದ ನೇಮಿಸಲಾಗಿದೆ.

| ಕ್ರಮ ಸಂಖ್ಯೆ | ಇಲಾಖೆಯ ಹೆಸರು | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005ರ ಸೆಕ್ಷನ್ 19(1)ರ ಪ್ರಕಾರ ಮೇಲ್ಮನವಿ ಪ್ರಾಧಿಕಾರ |
|---|---|---|---|---|
| 1. | ಉಪವಿಭಾಗಾಧಿಕಾರಿಗಳು ಹಾಗೂ ಉಪವಿಭಾಗದ ದಂಡಾಧಿಕಾರಿಗಳ ಕಾರ್ಯಾಲಯ, ಹಾಸನ ಉಪವಿಭಾಗ, ಹಾಸನ ಜಿಲ್ಲೆ | ಶ್ರೀಮತಿ ರೇಖಾ ತಹಶೀಲ್ದಾರ್ ಗ್ರೇಡ್ – 2 | ಕಛೇರಿಯ ಎಲ್ಲಾ ವಿಷಯ ನಿರ್ವಾಹಕರು | ಡಾ// ನವೀನ್ ಭಟ್. ವೈ, ಐ.ಎ.ಎಸ್., ಉಪವಿಭಾಗಾಧಿಕಾರಿಗಳು, ಹಾಸನ ಉಪ ವಿಭಾಗ, ಹಾಸನ. |

(ಡಾ// ನವೀನ್ ಭಟ್. ವೈ. ಐ.ಎ.ಎಸ್.,)
ಉಪವಿಭಾಗಾಧಿಕಾರಿ,
ಹಾಸನ ಉಪವಿಭಾಗ, ಹಾಸನ